ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 20 ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 20/11/20

# ದಾಸಪ್ಪ ಆಸ್ಪತ್ರೆಯಲ್ಲಿ ಲಸಿಕೆ ಸಂಗ್ರಹಕ್ಕೆ ತಯಾರಿ: ಆಯುಕ್ತ

## ಮುಂಜಾಗ್ರತಾ ಕ್ರಮವಾಗಿ ಆಸ್ಪತ್ರೆಗೆ ಸಿಸಿ ಕ್ಯಾಮರಾ ಅಳವಡಿಕೆ । ಬಿಗಿ ಭದ್ರತೆಗೆ ಕ್ರಮ

## ಪಾಲಿಕೆ ಬಳಿ 180 ಫ್ರಿಡ್ಜ್, 150 ಡೀಪ್ ಫ್ರೀಜರ್ ವ್ಯವಸ್ಥೆ: ಮಂಜುನಾಥ್ ಪ್ರಸಾದ್

• ಕನ್ನಡಪ್ರಭ ವಾರ್ತೆ ಬೆಂಗಳೂರು

ಕೇಂದ್ರ ಸರ್ಕಾರ ನೀಡಲಿರುವ ಕೋವಿಡ್ ಲಸಿಕೆಯನ್ನು ವೈಜ್ಞಾನಿಕವಾಗಿ ಸಂಗ್ರಹಿಸಿಡಲು ವ್ಯವಸ್ಥೆ ಮಾಡಿಕೊಳ್ಳಲಾಗುತ್ತಿದೆ. ಪಾಲಿಕೆಯ ದಾಸಪ್ಪ ಆಸ್ಪತ್ರೆಯಲ್ಲಿ ಕೋಲ್ಡ್ ಸ್ಟೋರೇಜ್ ವ್ಯವಸ್ಥೆ ಇರುವುದರಿಂದ ಕೋವಿಡ್ ಲಸಿಕೆಯನ್ನು ಇಲ್ಲಿ ಸಂಗ್ರಹಿಸಲಾಗುತ್ತದೆ. ಅಂತೆಯೇ ಈಗಾಗಲೇ ಪಾಲಿಕೆ ಬಳಿ 180 ರೆಫ್ರಿಜರೇಟರ್ ಹಾಗೂ 150 ಡೀಪ್ ಫ್ರೀಜರ್ ವ್ಯವಸ್ಥೆ ಮಾಡಲಾಗಿದೆ. ಸಂಗ್ರಹಿಸಲಾಗುವ ಲಸಿಕೆಯನ್ನು ನಗರದ 141 ಪ್ರಾಥಮಿಕ ಆರೋಗ್ಯ ಕೇಂದ್ರ, 28 ಹೆರಿಗೆ ಆಸ್ಪತ್ರೆ, 6 ರೆಫರಲ್ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆ, ಖಾಸಗಿ ಆಸ್ಪತ್ರೆ, ಮೆಡಿಕಲ್ ಕಾಲೇಜುಗಳಿಗೆ ವ್ಯವಸ್ಥಿತವಾಗಿ ಸಾಗಿಸಲು ಸಿದ್ಧತೆಗಳು ಮುಂದುವರಿದಿವೆ.

ಮೊದಲ ಹಂತದಲ್ಲಿ ಈ ಕೊರೋನಾ ಲಸಿಕೆಯನ್ನು 95000 ಕೊರೋನಾ ಹೋರಾಟಗಾರರಿಗೆ ನೀಡಲು ತೀರ್ಮಾನಿಸಲಾಗಿದೆ. ಈ ನಿಟ್ಟಿನಲ್ಲಿ ಕೊರೋನಾ ಹೋರಾಟಗಾರರ ವಿವರಗಳ ಪಟ್ಟಿಯನ್ನು ಸಂಬಂಧಪಟ್ಟ ಇಲಾಖೆಯಿಂದ ಪಡೆಯಲಾಗಿದೆ. ಅಂತೆಯೆ ಲಸಿಕೆ ಹಾಕಲು ಸಿಬ್ಬಂದಿ ಸೇರಿದಂತೆ ಸಕಲ ವ್ಯವಸ್ಥೆ ಮಾಡಿಕೊಳ್ಳಲಾಗುತ್ತಿದೆ ಎಂದ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ತಿಳಿಸಿದರು.

ದಾಸಪ್ಪ ಆಸ್ಪತ್ರೆಯಲ್ಲಿರುವ ಕೋಲ್ಡ್ ಸ್ಟೋರೇಜ್‌ನಲ್ಲಿ ಲಸಿಕೆ ದಾಸ್ತಾನು ಮಾಡಲಿದ್ದು, ಈ ಕೇಂದ್ರಕ್ಕೆ ಸಿಸಿ ಕ್ಯಾಮರಾ ಅಳವಡಿಕೆ ಸೇರಿದಂತೆ ಬಿಗಿ ಭದ್ರತೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.



ನಗರದ ದಾಸಪ್ಪ ಆಸ್ಪತ್ರೆಯಲ್ಲಿ ಕೋಲ್ಡ್ ಸ್ಟೋರೇಜ್ ವ್ಯವಸ್ಥೆಯಿರುವುದರಿಂದ ಕೋವಿಡ್ ಲಸಿಕೆ ಸಂಗ್ರಹಕ್ಕೆ ಸಿದ್ಧತೆ ನಡೆದಿದೆ.



ಕೋಲ್ಡ್ ಸ್ಟೋರೇಜ್ ಪರಿಶೀಲಿಸಿದ ಸಿಬ್ಬಂದಿ.



ಕೋಲ್ಡ್ ಸ್ಟೋರೇಜ್‌ಗಳ ಸಂಗ್ರಹ.

### ಪೋಲಿಯೋ ಮಾದರಿಯಲ್ಲಿ ಕೊರೋನಾ ಲಸಿಕೆ ನೀಡಿಕೆ



ಶೀಘ್ರದಲ್ಲೇ ಕೊರೋನಾ ಲಸಿಕೆ ಬಿಡುಗಡೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಲಸಿಕೆ ಸಂಗ್ರಹ, ಹಂಚಿಕೆ ಸೇರಿದಂತೆ ಪೋಲಿಯೋ ಲಸಿಕೆ ಮಾದರಿಯಲ್ಲಿ ಕೊರೋನಾ ಲಸಿಕೆ ಹಾಕಲು ಈಗಾಗಲೇ ಬಿಬಿಎಂಪಿ ಸಿದ್ಧತೆ ಆರಂಭಿಸಿದೆ.

• ಮಂಜುನಾಥ ಪ್ರಸಾದ್, ಪಾಲಿಕೆ ಆಯುಕ್ತ

### ನಗರದಲ್ಲಿ 4 ದಿನಗಳ ಬಳಿಕ 1000ಕ್ಕಿಂತ ಹೆಚ್ಚು ಕೇಸ್

ಬೆಂಗಳೂರು: ರಾಜಧಾನಿ ಬೆಂಗಳೂರಿನಲ್ಲಿ ನಾಲ್ಕು ದಿನದ ಬಳಿಕ ಕೊರೋನಾ ಸೋಂಕಿತರ ಸಂಖ್ಯೆ ಹಾಗೂ ಸಾವಿನ ಸಂಖ್ಯೆ ತುಸು ಹೆಚ್ಚಾಗಿದೆ. ಗುರುವಾರ 1,048 ಜನರಲ್ಲಿ ಸೋಂಕು ಕಾಣಿಸಿಕೊಂಡಿದ್ದು, 14 ಜನರು ಮೃತಪಟ್ಟಿದ್ದಾರೆ. 881 ಜನರು ಗುಣಮುಖರಾಗಿದ್ದಾರೆ.

ಒಟ್ಟು ಸೋಂಕಿತರ ಸಂಖ್ಯೆ 3,60,587ಕ್ಕೆ ತಲುಪಿದ್ದರೆ, ಗುಣಮುಖರ ಸಂಖ್ಯೆ 3,38,688ಕ್ಕೆ ಏರಿಕೆಯಾಗಿದೆ. 14 ಸೋಂಕಿತರ ಸಾವಿನೊಂದಿಗೆ ಈವರೆಗೆ 4,042 ಜನರು ಮೃತಪಟ್ಟಿದ್ದಾರೆ. ನಗರದಲ್ಲಿ ಇನ್ನೂ 17,856 ಸಕ್ರಿಯ ಪ್ರಕರಣಗಳಿದ್ದು, 297 ಮಂದಿ ವಿವಿಧ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.